# All India Radio: Bangalore
# National Bulletin In Kannada
# 11.04.2026  7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.04.2026  7.35 am**

**<>><><*><><<>**

ಮುಖ್ಯಾಂಶಗಳು

೧.  ಇಂದು ಸಮಾಜ ಸುಧಾರಕ, ಮಹಾತ್ಮ ಜ್ಯೋತಿಬಾ ಫುಲೆ ಅವರ ಜನ್ಮ ವಾರ್ಷಿಕೋತ್ಸವ; ದೇಶಾದ್ಯಂತ ಗೌರವನಮನ

೨.  ಪಶ್ಚಿಮ ಏಷ್ಯಾ ಸಂಘರ್ಷವನ್ನು ಕೊನೆಗೊಳಿಸಲು ಅಮೆರಿಕ -ಇರಾನ್ ನಡುವೆ ಇಂದು ಇಸ್ಲಾಮಾಬಾದ್‌ನಲ್ಲಿ ಮಹತ್ವದ ಮಾತುಕತೆ

೩.  ಶ್ರೀಹರಿಕೋಟಾದಲ್ಲಿ ಮುಂಬರುವ ಗಗನಯಾನ ಕಾರ್ಯಾಚರಣೆಗಾಗಿ ಇಸ್ರೋದಿಂದ ಎರಡನೇ ಸಂಯೋಜಿತ ಏರ್ ಡ್ರಾಪ್ ಪರೀಕ್ಷೆ- ಐಎಡಿಟಿ-೦೨ ಯಶಸ್ವಿ

೪.  ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ರಾಜಸ್ಥಾನ ರಾಯಲ್ಸ್ ತಂಡಕ್ಕೆ ಆರು ವಿಕೆಟ್‌ಗಳ ಜಯ

**<>><><*><><<>**

ಸಮಾಜ ಸುಧಾರಕ ಜ್ಯೋತಿಬಾ ಫುಲೆ ಅವರ ಜನ್ಮ ವಾರ್ಷಿಕೋತ್ಸವದಂದು ಇಂದು ದೇಶವು ಅವರಿಗೆ ಗೌರವ ನಮನ ಸಲ್ಲಿಸುತ್ತದೆ.  ೧೮೨೭ ರಲ್ಲಿ ಈ ದಿನದಂದು ಜನಿಸಿದ ಮಹಾತ್ಮ ಫುಲೆ ಮತ್ತು ಅವರ ಪತ್ನಿ ಸಾವಿತ್ರಿ ಫುಲೆ ಅವರು ಜಾತಿ ವ್ಯವಸ್ಥೆ ಮತ್ತು ಅಸ್ಪೃಶ್ಯತೆಯನ್ನು ತೊಡೆದುಹಾಕಲು ಹೋರಾಡುವುದರ ಜೊತೆಗೆ ಮಹಿಳಾ ಶಿಕ್ಷಣ ಮತ್ತು ಸಬಲೀಕರಣದ ಉದ್ದೇಶವನ್ನು ಪ್ರತಿಪಾದಿಸಿದ್ದರು. ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ..ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮತ್ತು ಇತರ ಪ್ರಮುಖ ಸಂಸದರು ಮತ್ತು ಗಣ್ಯರು ಸಂಸತ್ ಭವನದ ಆವರಣದಲ್ಲಿರುವ ಪ್ರೇರಣಾ ಸ್ಥಳದಲ್ಲಿ ಜ್ಯೋತಿಬಾ ಫುಲೆ ಅವರಿಗೆ ಪುಷ್ಪ ನಮನ ಸಲ್ಲಿಸಲಿದ್ದಾರೆ. ಜ್ಯೋತಿಬಾ ಫುಲೆ ಅವರ ಜನ್ಮ ವಾರ್ಷಿಕೋತ್ಸವದಂದು ದೇಶದ ವಿವಿಧ ಭಾಗಗಳಲ್ಲಿ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

**<>><><*><><<>**

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷವನ್ನು ಕೊನೆಗೊಳಿಸಲು ಅಮೆರಿಕ ಮತ್ತು ಇರಾನ್ ಇಂದು ಇಸ್ಲಾಮಾಬಾದ್‌ನಲ್ಲಿ ಮಹತ್ವದ ಮಾತುಕತೆ ನಡೆಸಲಿವೆ. ಅಮೆರಿಕದ ನಿಯೋಗದ ನೇತೃತ್ವವನ್ನು ಉಪಾಧ್ಯಕ್ಷ ಜೆಡಿ ವ್ಯಾನ್ಸ್ ವಹಿಸಲಿದ್ದಾರೆ, ಜೊತೆಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಮತ್ತು ಸಲಹೆಗಾರ ಜೇರೆಡ್ ಕುಶ್ನರ್ ನಿಯೋಗದ ನೇತೃತ್ವವ

ವಹಿಸಲಿದ್ದಾರೆ.  ಈ ನಡುವೆ ಇರಾನ್ ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಕರ್ ಖಲೀಬಾಫ್ ನೇತೃತ್ವದ ನಿಯೋಗವು, ನಿನ್ನೆ ರಾತ್ರಿ ಇಸ್ಲಾಮಾಬಾದ್‌ಗೆ ತಲುಪಿದ್ದು, ಪ್ರಸ್ತುತ ಸಂಘರ್ಷವನ್ನು ಕೊನೆಗೊಳಿಸುವ ಪ್ರಯತ್ನಗಳಲ್ಲಿ ನಿರ್ಣಾಯಕ ರಾಜತಾಂತ್ರಿಕ ಹಂತದ ಆರಂಭವನ್ನು ಸೂಚಿಸುತ್ತಿದೆ ಎಂದು ಇರಾನ್ ಮಾಧ್ಯಮ ವರದಿ ಮಾಡಿದೆ.  ನಿಯೋಗದಲ್ಲಿ ಇರಾನಿನ ವಿದೇಶಾಂಗ ಸಚಿವರು, ರಕ್ಷಣಾ ಮಂಡಳಿ ಕಾರ್ಯದರ್ಶಿ, ಕೇಂದ್ರ ಬ್ಯಾಂಕ್ ಗವರ್ನರ್ ಮತ್ತು ಹಲವಾರು ಸಂಸತ್ ಸದಸ್ಯರು ಸೇರಿದಂತೆ ಹಿರಿಯ ರಾಜಕೀಯ, ಮಿಲಿಟರಿ ಮತ್ತು ಆರ್ಥಿಕ ಅಧಿಕಾರಿಗಳು ಸೇರಿದ್ದಾರೆ.  ಇರಾನ್‌ನ ಪರಮಾಣು ಪುಷ್ಟೀಕರಣ ಕಾರ್ಯಕ್ರಮ, ಬ್ಯಾಲಿಸ್ಟಿಕ್ ಕ್ಷಿಪಣಿ ಅಭಿವೃದ್ಧಿ ಮತ್ತು ಹಾರ್ಮುಜ್ ಜಲಸಂಧಿ ತೆರವಿನ ಮೇಲೆ ಮಾತುಕತೆಗಳು ಗಮನಹರಿಸುವ ನಿರೀಕ್ಷೆಯಿದೆ.  ಹಾರ್ಮುಜ್ ಜಲಸಂಧಿಯ ಮೇಲಿನ ನಿಯಂತ್ರಣ, ಪ್ರಾದೇಶಿಕ ನೆಲೆಗಳಿಂದ ಅಮೆರಿಕದ ಪಡೆಗಳನ್ನು ಹಿಂತೆಗೆದುಕೊಳ್ಳುವುದು, ಯುರೇನಿಯಂ ಅನ್ನು ಉತ್ಕೃಷ್ಟಗೊಳಿಸುವ ಹಕ್ಕನ್ನು ಗುರುತಿಸುವುದು ಮತ್ತು ಲೆಬನಾನ್‌ನಲ್ಲಿ ಹೆಜ್ಬೊಲ್ಲಾ ಮೇಲಿನ ಇಸ್ರೇಲಿ ದಾಳಿಗಳನ್ನು ಕೊನೆಗೊಳಿಸುವುದು ಸೇರಿದಂತೆ ೧೦ ಅಂಶಗಳ ಚೌಕಟ್ಟನ್ನು ಟೆಹ್ರಾನ್ ಪ್ರಸ್ತಾಪಿಸಿದೆ.

**<>><><*><><<>**

ಆಂಧ್ರಪ್ರದೇಶದ ಶ್ರೀಹರಿಕೋಟಾದಲ್ಲಿ ಮುಂಬರುವ ಗಗನಯಾನ ಕಾರ್ಯಾಚರಣೆಗಾಗಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಎರಡನೇ ಸಂಯೋಜಿತ ಏರ್ ಡ್ರಾಪ್ ಪರೀಕ್ಷೆ- ಐಎಡಿಟಿ-೦೨ ಅನ್ನು ಯಶಸ್ವಿಯಾಗಿ ನಡೆಸಿದೆ. ಮಾನವ ಹಾರಾಟದ ಸಮಯದಲ್ಲಿ ಗಗನಯಾತ್ರಿಗಳು ಕುಳಿತುಕೊಳ್ಳುವ ಕ್ಯಾಪ್ಸುಲ್ - ಸಿಬ್ಬಂದಿ ಮಾಡ್ಯೂಲ್‌ನ ಸುರಕ್ಷಿತ ಚೇತರಿಕೆಯನ್ನು ಖಚಿತಪಡಿಸಿಕೊಳ್ಳಲು ಈ ವ್ಯವಸ್ಥೆ ಅತ್ಯಗತ್ಯ. ಮಾಡ್ಯೂಲ್ ಬಿಡುಗಡೆಯಾದ ನಂತರ, ೧೦ ಪ್ಯಾರಾಚೂಟ್‌ಗಳನ್ನು ಒಳಗೊಂಡಿರುವ ಈ ವ್ಯವಸ್ಥೆಯನ್ನು ನಿಯೋಜಿಸಲಾಯಿತು. ಇದು ಕ್ಯಾಪ್ಸುಲ್ ಸುರಕ್ಷಿತ ಸ್ಪ್ಲಾಶ್‌ಡೌನ್ ವೇಗವನ್ನು ನಿಧಾನಗೊಳಿಸಲು ಸಹಾಯ ಮಾಡುತ್ತದೆ. ಆಗಸ್ಟ್ ೨೪, ೨೦೨೫ ರಂದು ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಲ್ಲಿ ನಡೆದ ಮೊದಲ ಐಎಡಿಟಿ ಯಶಸ್ವಿಯಾಗಿ ಪೂರ್ಣಗೊಂಡ ನಂತರ ಐಎಡಿಟಿ-೦೨ ಅನ್ನು ಅನುಸರಿಸುತ್ತದೆ.  ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿದ್ದಕ್ಕಾಗಿ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಇಸ್ರೋವನ್ನು ಅಭಿನಂದಿಸಿದ್ದಾರೆ. ಭಾರತದ ಮೊದಲ ಮಾನವ ಬಾಹ್ಯಾಕಾಶ ಹಾರಾಟವು ೨೦೨೭ ರಲ್ಲಿ ಶ್ರೀಹರಿಕೋಟಾದಿಂದ ಉಡಾವಣೆಯಾಗಲಿದೆ.

**<>><><*><><<>**

ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರು ನಿನ್ನೆ ಮ್ಯಾನ್ಮಾರ್ ಅಧ್ಯಕ್ಷ ಮಿನ್ ಆಂಗ್ ಹ್ಲೈಂಗ್ ಅವರನ್ನು ಭೇಟಿ ಮಾಡಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿ ಕೊಂಡಿರುವ ಸಚಿವರು, ಮ್ಯಾನ್ಮಾರ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಪ್ರಧಾನಿ ನರೇಂದ್ರ ಮೋದಿ ಅವರಿಂದ ಹ್ಲೈಂಗ್ ಅವರಿಗೆ ಅಭಿನಂದನಾ ಪತ್ರವನ್ನು ಹಸ್ತಾಂತರಿಸಿರುವುದಾಗಿ ತಿಳಿಸಿದ್ದಾರೆ. ಮ್ಯಾನ್ಮಾರ್ ಮತ್ತು ಭಾರತವು ಬಹು ಕಾಲದ ಸಂಬಂಧಗಳೊಂದಿಗೆ ಹಾಗೂ ಭೂ ಮತ್ತು ಕಡಲ ನೆರೆಹೊರೆಯವರೊಂದಿಗೆ ನಿಕಟ ಪಾಲುದಾರರಾಗಿದ್ದಾರೆ. ಮ್ಯಾನ್ಮಾರ್‌ನೊಂದಿಗೆ ಬಹುಮುಖಿ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಬಲಪಡಿಸಲು ಮತ್ತು ಮ್ಯಾನ್ಮಾರ್ ಜನರ ಪ್ರಯೋಜನಕ್ಕಾಗಿ ಅಭಿವೃದ್ಧಿ ನೆರವು ನೀಡಲು ಸರ್ಕಾರ ಬದ್ಧವಾಗಿದೆ ಎಂದು ಕೀರ್ತಿ ವರ್ಧನ್ ಸಿಂಗ್ ಹೇಳಿದ್ದಾರೆ.

<>><><*><><<>

ಜಾಗತಿಕ ಸವಾಲುಗಳ ನಡುವೆಯೂ, ಭಾರತದ ಕಡಲ ವಲಯವು ಬಲಿಷ್ಠ ಮತ್ತು ಪರಿಣಾಮಕಾರಿಯಾಗಿ ಉಳಿದಿದೆ ಎಂದು ಬಂದರುಗಳು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವ ಸರ್ಬಾನಂದ ಸೋನೋವಾಲ್ ಹೇಳಿದ್ದಾರೆ. ಉನ್ನತ ಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು, ವ್ಯಾಪಾರ ಹಿತಾಸಕ್ತಿಗಳನ್ನು ಎಲ್ಲಾ ವಿಧಾನಗಳಿಂದ ರಕ್ಷಿಸಲು ಮತ್ತು ಭೌಗೋಳಿಕ ರಾಜಕೀಯ ಪರಿಸ್ಥಿತಿಗಳಿಂದ ಪ್ರಭಾವಿತವಾಗದಂತೆ ಪೂರೈಕೆ ಸರಪಳಿ ಸುಸ್ಥಿರವಾಗಿರುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ್ದಾರೆ. ಸಕಾಲಿಕ ಹಸ್ತಕ್ಷೇಪ ಮತ್ತು ನಿರಂತರ ಮೇಲ್ವಿಚಾರಣೆಯು, ಪಶ್ಚಿಮ ಏಷ್ಯಾದ ಬಿಕ್ಕಟ್ಟಿನ ಮಧ್ಯೆ ಪ್ರಮುಖ ಬಂದರುಗಳಲ್ಲಿ ಸುಮಾರು ೯೦ ಪ್ರತಿಶತ ಬಾಕಿ ಸರಕುಗಳನ್ನು ತೆರವುಗೊಳಿಸಲು ಕಾರಣವಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಸಂಘಟಿತ ಮತ್ತು ಪೂರ್ವಭಾವಿ ಕ್ರಮಗಳು ವ್ಯಾಪಾರದ ಮೇಲೆ ಕನಿಷ್ಠ ಪರಿಣಾಮ ಬೀರುವ, ಬಂದರು ಕಾರ್ಯಾಚರಣೆಗಳ ತ್ವರಿತ ಸ್ಥಿರೀಕರಣವನ್ನು ಖಚಿತಪಡಿಸುತ್ತವೆ ಎಂದು ಸಚಿವ ಸರ್ಬಾನಂದ ಸೋನೋವಾಲ್ ಹೇಳಿದ್ದಾರೆ.

<>><><*><><<>

೨೦೩೦ ರಲ್ಲಿ ವಿಶ್ವ ದರ್ಜೆಯ, ಕ್ರೀಡಾಪಟು ಕೇಂದ್ರಿತ ಮತ್ತು ಸುಸ್ಥಿರ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸುವ ದೇಶದ ಬದ್ಧತೆಯನ್ನು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ಪುನರುಚ್ಚರಿಸಿದ್ದಾರೆ. ಸಚಿವರು, ಕಾಮನ್‌ವೆಲ್ತ್ ಕ್ರೀಡಾ ಅಧ್ಯಕ್ಷ ಡಾ.ಡೊನಾಲ್ಡ್ ರುಕರೆ ಅವರೊಂದಿಗೆ ಉನ್ನತ ಮಟ್ಟದ ಸಭೆ ನಡೆಸಿ, ಕ್ರೀಡಾಕೂಟದ ಪರಿಣಾಮಕಾರಿ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ಪೂರ್ವಸಿದ್ಧತಾ ಕ್ರಮಗಳು, ಸಮನ್ವಯ ಕಾರ್ಯವಿಧಾನಗಳು ಮತ್ತು ಸಮಯಸೂಚಿಗಳ ಮೇಲೆ ಚರ್ಚೆಗಳು ಕೇಂದ್ರೀಕರಿಸಿವೆ ಎಂದು ತಿಳಿಸಿದ್ದಾರೆ.

<>><><*><><<>

ಭಾರತವು ದೇಶೀಯವಾಗಿ ಅಭಿವೃದ್ಧಿಪಡಿಸಿದ ಮೂಲಮಾದರಿ ಫಾಸ್ಟ್ ಬ್ರೀಡರ್ ರಿಯಾಕ್ಟರ್ ಇಂಧನ ಸುರಕ್ಷತೆಯತ್ತ ಸಾಗುತ್ತಿರುವ ದೇಶದ ಪ್ರಯಾಣದಲ್ಲಿ ಒಂದು ಪ್ರಮುಖ ಮೈಲಿಗಲ್ಲು ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ವಕ್ತಾವ್ಯ-೨೦೨೬ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ಅಭಿವೃದ್ಧಿಯು, ದೀರ್ಘಾವಧಿಯ ಶುದ್ಧ ಇಂಧನ ಗುರಿಗಳನ್ನು ಸಾಧಿಸುವಲ್ಲಿ ಮತ್ತು ದೇಶದ ಸಾಮರ್ಥ್ಯವನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದ್ದಾರೆ. ಕಳೆದ ದಶಕದಲ್ಲಿ ಎರಡು ಲಕ್ಷಕ್ಕೂ ಹೆಚ್ಚು ನವೋದ್ಯಮಗಳ ಸಂಖ್ಯೆಯೊಂದಿಗೆ ದೇಶವು, ಪ್ರಸ್ತುತ ಜಾಗತಿಕವಾಗಿ ಪ್ರಮುಖ ನವೋದ್ಯಮ ರಾಷ್ಟ್ರಗಳಲ್ಲಿ ಸ್ಥಾನ ಪಡೆದಿದೆ ಎಂದು ಹೇಳಿದ್ದಾರೆ.

<>><><*><><<>

ಮಾದಕ ದ್ರವ್ಯ ಭಯೋತ್ಪಾದನೆಯು, ಇನ್ನು ಮುಂದೆ ದೂರದ ಬೆದರಿಕೆಯಲ್ಲ, ಬದಲಾಗಿ ಭದ್ರತೆ, ಆರ್ಥಿಕ ಮತ್ತು ಆಡಳಿತದ ಸವಾಲುಗಳ ತಿರುಳಾಗಿದೆ ಎಂದು ಲೆಫ್ಟಿನೆಂಟ್ ಗವರ್ನರ್ ತರಂಜಿತ್ ಸಿಂಗ್ ಸಂಧು ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಮಾದಕ ದ್ರವ್ಯ ಭಯೋತ್ಪಾದನೆಯನ್ನು ಎದುರಿಸುವ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ದೇಶಿಸಿ ಅವರು ಮಾತನಾಡಿದರು. ಜಾಗತಿಕ ಮಾದಕ

ದ್ರವ್ಯಗಳು ಸಂಘಟಿತ ಅಪರಾಧ, ಹಣ ವರ್ಗಾವಣೆ ಮತ್ತು ಭಯೋತ್ಪಾದನೆಗೆ ಹಣಕಾಸು ಒದಗಿಸುವುದನ್ನು ಉತ್ತೇಜಿಸುತ್ತವೆ ಎಂದು ಅವರು ಹೇಳಿದ್ದಾರೆ.

<>><><*><><<>

ಕಾನ್ಸ್ ಚಲನಚಿತ್ರೋತ್ಸವದ ಅನ್ ಸೆರ್ಟೈನ್ ರಿಗಾರ್ಡ್ ವಿಭಾಗದಲ್ಲಿ ಆಯ್ಕೆಯಾದ ಮೊದಲ ನೇಪಾಳಿ ಚಿತ್ರ ಎಂಬ ಹೆಗ್ಗಳಿಕೆಗೆ ಪಾತ್ರವಾಗುವ ಮೂಲಕ ನೇಪಾಳಿ ಚಲನಚಿತ್ರ 'ಎಲಿಫೆಂಟ್ಸ್ ಇನ್ ದಿ ಫಾಗ್' ಇತಿಹಾಸ ಸೃಷ್ಟಿಸಿದೆ. ಈ ಚಿತ್ರವು ಆನೆ ದಾಳಿಯಿಂದ ಬಳಲುತ್ತಿರುವ ಒಂದು ವಸಾಹತು ಪ್ರದೇಶದಲ್ಲಿ ವಾಸಿಸುವ ಕುಟುಂಬವನ್ನು ಪ್ರತಿಬಿಂಬಿಸುತ್ತದೆ ಹಾಗೂ ತಾಯಿ-ಮಗಳ ಸಂಬಂಧವನ್ನು ಕೇಂದ್ರೀಕರಿಸುತ್ತದೆ. ಅಬಿನಾಶ್ ಬಿಕ್ರಮ್ ಶಾ ಬರೆದು ನಿರ್ದೇಶಿಸಿದ ಈ ಚಿತ್ರವು ಮುಂದಿನ ತಿಂಗಳು ೧೨ ರಿಂದ ೨೩ ರವರೆಗೆ ಫ್ರಾನ್ಸ್‌ನಲ್ಲಿ ನಡೆಯಲಿರುವ ೭೮ ನೇ ಆವೃತ್ತಿಯ ಚಲನಚಿತ್ರೋತ್ಸವದಲ್ಲಿ ಸ್ಪರ್ಧಿಸಲಿದೆ.

<>><><*><><<>

ಗುವಾಹಟಿಯ ಬರ್ಸಪಾರ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ರಾಜಸ್ಥಾನ ರಾಯಲ್ಸ್ ತಂಡವು, ಆರು ವಿಕೆಟ್‌ಗಳ ಜಯಸಾಧಿಸುವ ಮೂಲಕ ತನ್ನ ಗೆಲುವಿನ ಓಟವನ್ನು ಮುಂದುವರಿಸಿದೆ. ಆರ್‌ಸಿಬಿ ನೀಡಿದ ೨೦೨ ರನ್‌ಗಳ ಗೆಲುವಿನ ಗುರಿ ಬೆನ್ನಟ್ಟಿದ ರಾಜಸ್ಥಾನ ರಾಯಲ್ಸ್ ತಂಡ, ೧೮ ಓವರ್‌ಗಳಲ್ಲೇ ನಾಲ್ಕು ವಿಕೆಟ್‌ಗಳ ನಷ್ಟಕ್ಕೆ ಸುಲಭವಾಗಿ ಗುರಿ ತಲುಪಿತು. ವೈಭವ್ ಸೂರ್ಯವಂಶಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>'

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಗಂಟೆಗೆ ><><<>